**<u>ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕೆ.ಆರ್ ನಗರ</u>**

ಸಿಸಿ ನಂ. **216/2024**

**ಪಿರ್ಯಾದುದಾರರುಃ** ಶ್ರೀ. ಆರ್.ಬಾಲರಾಜು ಬಿನ್
ಲೇಟ್ ರಾಮುಮೂರ್ತಿ,

**--ವಿರುದ್ಧ –**

**ಆರೋಪಿಃ** ಶ್ರೀ. ಕೆ.ಪಿ.ಕಿರಣ್ ಬಿನ್ ಪುಷ್ಪಲತಾ.ಸಿ.ಎನ್,

**<u>ಆಪಾದನೆ</u>**

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.3,00,000/- ಮರುಪಾವತಿಗಾಗಿ **ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಕೆ ಆರ್ ನಗರ** ಚೆಕ್ ನಂಃ **063153** ದಿನಾಂಕಃ **24.04.2024** ರೂ.3,00,000/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ **ನವನಗರ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕೆ.ಆರ್.ನಗರ ಶಾಖೆ,** ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ **"ಸಾಕಷ್ಟು ಹಣವಿಲ್ಲ"** ಎಂಬ ಹಿಂಬರಹಗಳೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ: **05.07.2024** ರಂದು ಹಿಂಬರಹವನ್ನು ನೀಡಿದ್ದು, ನಂತರ ಫಿರ್ಯಾದಿದಾರರು ತಮ್ಮ ವಕೀಲರ ಮುಖಾಂತರ ದಿನಾಂಕಃ **11.07.2024** ರಂದು ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ-1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?
ಉತ್ತರಃ

ಪ್ರಶ್ನೆ-2 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೇ?
ಉತ್ತರಃ

(ದಿನಾಂಕ **29.04.2025** ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.**

This is a True Copy of the Court Records Online. Authenticated @ districts.ecourtsindia.com/cnr/KAMS400007382024/truecopy/order-3.pdf

www.ecourtsindia.com